# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ | : | 779(923) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಜಗದೇವ್ ಗುತ್ತೇದಾರ್ (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸ ಬೇಕಾದ ದಿನಾಂಕ | : | 15.12.2025 |
| ಉತ್ತರಿಸುವ ಸಚಿವರು | : | ಮಾನ್ಯ ಅರಣ್ಯ, ಪರಿಸರ ಮತ್ತು ಜೀವಪರಿಸ್ಥಿತಿ ಸಚಿವರು |

*******

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವಾಯು ಮಾಲಿನ್ಯ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದಿಯೇ: (ಕಳೆದ ಮೂರು ವರ್ಷಗಳ ಜಿಲ್ಲಾವಾರು ಮಾಹಿತಿಯನ್ನು ನೀಡುವುದು) | ಗಮನಕ್ಕೆ ಬಂದಿರುತ್ತದೆ.<br><br>ಕೇಂದ್ರದ ಅರಣ್ಯ, ಪರಿಸರ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯವು ರಾಷ್ಟ್ರೀಯ ಶುದ್ಧ ಗಾಳಿ ಕಾರ್ಯಕ್ರಮವನ್ನು (NCAP) ಜಾರಿ ಮಾಡಿದ್ದು, ರಾಜ್ಯದ 4 ನಗರಗಳನ್ನು ಅಂದರೆ ಬೆಂಗಳೂರು, ಹುಬ್ಬಳ್ಳಿ-ಧಾರವಾಡ, ಕಲಬುರಗಿ ಮತ್ತು ದಾವಣಗೆರೆ ಇವುಗಳನ್ನು ರಾಷ್ಟ್ರೀಯ ಪರಿವೇಷ್ಟಕ ವಾಯು ಗುಣಮಟ್ಟ ಸಾಧಿಸದ ನಗರಗಳೆಂದು (Non-attainment cities) ಗುರುತಿಸಿದೆ. ಸದರಿ ನಗರಗಳಲ್ಲಿ ವಾಯು ಮಾಲಿನ್ಯವನ್ನು ನಿಯಂತ್ರಣ ಮಾಡುವ ದೃಷ್ಠಿಯಿಂದ ಬೆಂಗಳೂರು ನಗರಕ್ಕೆ ಸಂಬಂಧಿಸಿದಂತೆ, 44 ಅಂಶಗಳ ಕ್ರಿಯಾ ಯೋಜನೆಯ್ನನು ಹಾಗೂ ಇತರೆ 3 ನಗರಗಳಿಗೆ ಸಂಬಂಧಿಸಿದಂತೆ, 27 ಅಂಶಗಳ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ, ಅವುಗಳನ್ನು ಸಮಗ್ರವಾಗಿ ಅನುಷ್ಠಾನಗೊಳಿಸಲಾಗುತ್ತಿದೆ. |
| ಆ) | ವಾಯು ಮಾಲಿನ್ಯ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು: | ರಾಷ್ಟ್ರೀಯ ವಾಯು ಗುಣಮಟ್ಟ ಪರಿಶೀಲನಾ ಕಾರ್ಯಕ್ರಮದ (National Air Monitoring Programme-NAMP) ಅಡಿಯಲ್ಲಿ ಬೆಂಗಳೂರು ನಗರ ಹಾಗೂ ರಾಜ್ಯದ ಎಲ್ಲಾ ಪ್ರಮುಖ ನಗರಗಳ ವಾಯು ಗುಣಮಟ್ಟದ ಮಾಪನವನ್ನು ನಿರಂತರವಾಗಿ ಮಾಡಲಾಗುತ್ತಿದೆ.<br><br>ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ಮಾರ್ಗಸೂಚಿಯಂತೆ ರಾಜ್ಯದಲ್ಲಿ ಒಟ್ಟು 43 ಮಾನವ ಚಾಲಿತ ವಾಯು ಮಾಪನ ಕೇಂದ್ರಗಳು(Manual Monitoring Stations) ಹಾಗೂ 39 ನಿರಂತರ ಪರಿವೇಷ್ಟಕ ವಾಯು ಗುಣಮಟ್ಟ ಮಾಪನ ಕೇಂದ್ರಗಳನ್ನು(Continuous Ambient Air Quality Monitoring Stations) ಸ್ಥಾಪಿಸಿ, ವಾಯು ಗುಣಮಟ್ಟವನ್ನು ನಿರಂತರವಾಗಿ ಮಾಪನ ಮಾಡಲಾಗುತ್ತದೆ. 39 ನಿರಂತರ ವಾಯು ಮಾಪನ ಕೇಂದ್ರಗಳಲ್ಲಿ ಸತತ ಇಪ್ಪತ್ನಾಲ್ಕು ಗಂಟೆಗಳ ಕಾಲ ಗಂಧಕದ ಡೈಆಕ್ಸೈಡ್ ($SO_2$) ಸಾರಜನಕದ ಡೈಆಕ್ಸೈಡ್ ($NO_2$), ಧೂಳಿನ ಕಣಗಳು, ($PM_{10}$) ಮತ್ತು ($PM_{2.5}$), ಇಂಗಾಲದ ಮಾನಾಕ್ಸೈಡ್ (CO), ಓಜೋನ್ (O3), ಅಮೋನಿಯಾ (NH3) ಮತ್ತು ಬೆನ್‌ಜೀನ್ (Benzene) ಸೇರಿದಂತೆ ಎಂಟು ಮಲಿನ ಕಾರಕಗಳನ್ನು ಮಾಪನ ಮಾಡಲಾಗುತ್ತಿದೆ ಹಾಗೂ 37 ಮಾನವ ಚಾಲಿತ ಕೇಂದ್ರಗಳಲ್ಲಿ (Manual Stations) 24 ಗಂಟೆಗಳ ಕಾಲ, ವಾರಕ್ಕೆ 2 ಬಾರಿ, ಗಂಧಕದ ಡೈಆಕ್ಸೈಡ್ ($SO_2$), ಸಾರಜನಕದ ಡೈಆಕ್ಸೈಡ್ ($NO_2$), ಧೂಳಿನ ಕಣಗಳ ಗಾತ್ರ 10 ಮೈಕ್ರಾನ್ ಹಾಗೂ 2.5 ಮೈಕ್ರಾನ್ (($PM_{10}$ |

ಮತ್ತು $PM_{2.5}$), ಅಮೋನಿಯ, ಆರ್ಸನಿಕ್ ಮತ್ತು ಸೀಸ ಮಲಿನಕಾರಕಗಳನ್ನು ವಿಶ್ಲೇಷಿಸಲಾಗುತ್ತಿದೆ.

ಸದರಿ ಮಾಪನದಿಂದ ಸಂಗ್ರಹಿಸಿದ ದತ್ತಾಂಶವನ್ನು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ, ದೆಹಲಿಗೆ ವಿದ್ಯುನ್ಮಾನ ಮೂಲಕ ಕಳುಹಿಸಲಾಗುತ್ತಿದೆ ಮತ್ತು ಮಂಡಳಿಯ ಅಂತರ್ಜಾಲದಲ್ಲಿ (ವೆಬ್‌ಸೈಟ್) ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದೆ. ಅಲ್ಲದೆ ವಾಯು ಮಾಪನದ ದತ್ತಾಂಶವನ್ನು ಸಂಬಂಧಪಟ್ಟ ಇಲಾಖೆಗಳಿಗೆ ನಿಯಮಿತವಾಗಿ ಕಳುಹಿಸುತ್ತಾ ಮಾಲಿನ್ಯ ನಿಯಂತ್ರಿಸುವ ನಿಟ್ಟಿನಲ್ಲಿ ಕ್ರಿಯಾಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಸೂಚಿಸಲಾಗುತ್ತಿದೆ.

ಪ್ರತಿ ದಿನ ಬೆಂಗಳೂರಿನ 11 ನಿರಂತರ ಪರಿವೇಷ್ಠಕ ವಾಯು ಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕವನ್ನು (AQI) ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರುಗಳಿಗೆ ಹಾಗೂ ವಾರ್ತಾ ಇಲಾಖೆಗೆ ಎಸ್.ಎಂ.ಎಸ್ ಮುಖಾಂತರ ಕಳುಹಿಸಲಾಗುತ್ತಿದೆ.

ಕೇಂದ್ರದ ಅರಣ್ಯ, ಪರಿಸರ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯವು ರಾಷ್ಟ್ರೀಯ ಶುದ್ಧ ಗಾಳಿ ಕಾರ್ಯಕ್ರಮವನ್ನು (NCAP) ಜಾರಿ ಮಾಡಿದ್ದು, ರಾಜ್ಯದ 4 ನಗರಗಳನ್ನು ಅಂದರೆ ಬೆಂಗಳೂರು, ಹುಬ್ಬಳ್ಳಿ-ಧಾರವಾಡ, ಕಲಬುರಗಿ ಮತ್ತು ದಾವಣಗೆರೆ ಇವುಗಳನ್ನು ರಾಷ್ಟ್ರೀಯ ಪರಿವೇಷ್ಠಕ ವಾಯು ಗುಣಮಟ್ಟ ಸಾಧಿಸದ ನಗರಗಳೆಂದು (Non-attainment cities) ಗುರುತಿಸಿದೆ. ಸದರಿ ನಗರಗಳಲ್ಲಿ ವಾಯು ಮಾಲಿನ್ಯವನ್ನು ನಿಯಂತ್ರಣ ಮಾಡುವ ದೃಷ್ಠಿಯಿಂದ ಬೆಂಗಳೂರು ನಗರಕ್ಕೆ ಸಂಬಂಧಿಸಿದಂತೆ 44 ಅಂಶಗಳ ಕ್ರಿಯಾ ಯೋಜನೆಯನ್ನು ಹಾಗೂ ಇತರೆ 3 ನಗರಗಳಿಗೆ ಸಂಬಂಧಿಸಿದಂತೆ 27 ಅಂಶಗಳ ಕ್ರಿಯಾ ಯೋಜಯನ್ನು ಸಿದ್ಧಪಡಿಸಿ, ಅವುಗಳನ್ನು ಸಮಗ್ರವಾಗಿ ಅನುಷ್ಠಾನಗೊಳಿಸಲಾಗುತ್ತಿದೆ.

ಇದಲ್ಲದೆ, ರಾಜ್ಯದಲ್ಲಿ ನಾಲ್ಕು ನಗರಗಳಲ್ಲಿ ವಾಯು ಮಾಲಿನ್ಯಕ್ಕೆ ಕಾರಣವಾದ ಮೂಲಗಳನ್ನು ತಿಳಿಯಲು 'Source Apportionment and Emission Inventory Study' ಅಧ್ಯಯನವನ್ನು ಬೆಂಗಳೂರು ನಗರಕ್ಕೆ ಸಂಬಂಧಿಸಿದಂತೆ M/s. Centre for Study for Science, Technology and Policy (CSTEP), Bengaluru ಇವರಿಂದ ಹಾಗೂ ಇತರೆ ಮೂರು ಕಲುಷಿತ ನಗರಗಳಿಗೆ ಸಂಬಂಧಿಸಿದಂತೆ IIT, Madras ಇವರಿಂದ ಅಧ್ಯಯನ ಕೈಗೊಳ್ಳಲಾಗಿದ್ದು, ಅದರಂತೆ ಕ್ರಿಯಾ ಯೋಜನೆಯನ್ನು ಪರಿಷ್ಕರಿಸಿ, ವಾಯು ಮಾಲಿನ್ಯ ನಿಯಂತ್ರಣಕ್ಕಾಗಿ ಕ್ರಮ ವಹಿಸಲಾಗುತ್ತಿದೆ.

ಅಲ್ಲದೆ, ವಾಯು ಮಾಲಿನ್ಯ ತಡೆಯಲು ಈ ಕೆಳಕಂಡ ಕ್ರಮಗಳನ್ನು ಸಹ ಕೈಗೊಳ್ಳಲಾಗಿದೆ.

- ಪರಿಸರ (ಸಂರಕ್ಷಣಾ) ಕಾಯ್ದೆ, 1989 ರಲ್ಲಿ ನಿಗಧಿಪಡಿಸಿರುವಂತೆ ವಾಯು ಮಾನಕಗಳು ನಿಗಧಿ ಪಡಿಸಿದ ಪರಿಮಿತಿಯೊಳಗಿರುವಂತೆ ಕಾರ್ಖಾನೆಗಳಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ ನೀಡುವ ಸಮ್ಮತಿ ಪತ್ರದಲ್ಲಿ ನಿಬಂಧನೆ ವಿಧಿಸಲಾಗುತ್ತಿದೆ ಹಾಗೂ ಆಗಿಂದಾಗ್ಗೆ

ವಾಯು ಮಾಲಿನ್ಯ ಮಾಡುವಂತಹ ಕಾರ್ಖಾನೆಗಳನ್ನು ಪರಿವೀಕ್ಷಣೆಗೊಳಪಡಿಸಲಾಗುತ್ತಿದೆ.

- ರಾಸಾಯನಿಕ ಹಾಗೂ ಇನ್ನಿತರ ಅಧಿಕ ಮಾಲಿನ್ಯ ಉಂಟುಮಾಡುವ ಕೈಗಾರಿಕೆಗಳಿಗೆ ನಿರಂತರ ಎಮಿಶನ್ ಮಾಪನ ಉಪಕರಣಗಳನ್ನು ಅಳವಡಿಸಿ ಮಾಪನ ವರದಿಯನ್ನು ಕೇಂದ್ರ ಮತ್ತು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಂತರ್ಜಾಲಗಳಿಗೆ ಸಂಪರ್ಕ ಕಲ್ಪಿಸಲಾಗಿದೆ ಇದರಿಂದ ಕೈಗಾರಿಕೆಗಳು ನಿಗಧಿ ಪಡಿಸಿದ ಮಾನಕಕ್ಕಿಂತ ಹೆಚ್ಚು ಹೊಗೆ ಹೊರಸೂಸದಂತೆ ಕಾಲಕಾಲಕ್ಕೆ ಇವುಗಳ ಕಾರ್ಯಕ್ಷಮತೆಯನ್ನು ಪರೀಕ್ಷಿಸಿ ಮಂಡಳಿಯಿಂದ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.
- ಘನತ್ಯಾಜ್ಯ ಸುಡುವುದರಿಂದಾಗುವ ವಾಯು ಮಾಲಿನ್ಯವನ್ನು ತಡೆಯುವ ದೃಷ್ಟಿಯಿಂದ ಸರ್ಕಾರದ ಅಧಿಸೂಚನೆ ಸಂಖ್ಯೆ: ಅಪಜೀ 06 ಇಎನ್‌ಜಿ 2017, ದಿನಾಂಕ:03.08.2017 ರಲ್ಲಿ ರಾಜ್ಯ ಸರ್ಕಾರವು ವಾಯು (ಮಾಲಿನ್ಯ ನಿಯಂತ್ರಣ ಮತ್ತು ನಿವಾರಣೆ) ಕಾಯ್ದೆ, 1981ರ ಕಲಂ 19(5)ರ ಅಡಿಯಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿ ಸೇರಿದಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಹಾಗೂ ರಾಜ್ಯಾದ್ಯಂತ ಇರುವ ಘನತ್ಯಾಜ್ಯ ಭೂ ಭರ್ತಿ ಘಟಕಗಳಲ್ಲಿನ ತೆರೆದ ಜಾಗದಲ್ಲಿ ಮರಗಿಡಗಳ ರೆಂಬೆ ಮತ್ತು ಎಲೆಗಳೂ ಸೇರಿದಂತೆ ಯಾವುದೇ ಘನತ್ಯಾಜ್ಯ ಸುಡುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.
- ಕಟ್ಟಡಗಳ ನಿರ್ಮಾಣ ಮತ್ತು ಕಟ್ಟಡ ಉರುಳಿಸುವ ಸಮಯದಲ್ಲಿ ಉಂಟಾಗುವ ಘನತ್ಯಾಜ್ಯಗಳನ್ನು (Construction & Demolition Waste) ವಾಹನಗಳಲ್ಲಿ ಸಾಗಿಸುವ ಸಮಯದಲ್ಲಿ ತ್ಯಾಜ್ಯ ಹಾಗೂ ಚೆಲ್ಲದಂತೆ ಸೂಕ್ತ ಮುಚ್ಚಿದ ರೀತಿಯಲ್ಲಿ ಸಾಗಿಸುವಂತೆ ಹಾಗೂ ತ್ಯಾಜ್ಯಕ್ಕೆ ನೀರಿನ ಸಿಂಪರಣೆ ಮಾಡಿ ಯಾವುದೇ ರೀತಿಯ ವಾಯು ಮಾಲಿನ್ಯ ಆಗದಂತೆ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರಿಗೂ ಸೇರಿದಂತೆ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬಿ.ಎಂ.ಆರ್.ಸಿ.ಎಲ್, ಕೆ.ಆರ್.ಡಿ.ಎಲ್, ಸಿ.ಪಿ.ಡಬ್ಲ್ಯೂಡಿ, ಪಿ.ಡಬ್ಲ್ಯೂಡಿ, ಇಲಾಖೆಗಳಿಗೆ ಅಗತ್ಯ ನಿರ್ದೇಶನ ನೀಡಲಾಗಿದೆ.
- ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಪರಿಸರ ವಿಮೋಚನಾ ಪತ್ರ (Environmental Clearance) ನೀಡುವ ಸಂದರ್ಭದಲ್ಲಿ ಧೂಳಿನ ಕಣಗಳಿಂದ ಉಂಟಾಗುವ ಮಾಲಿನ್ಯವನ್ನು ತಡೆಗಟ್ಟುವ ದೃಷ್ಟಿಯಿಂದ ಸುತ್ತಲೂ ತಗಡಿನ ತಡೆಗೋಡೆಯನ್ನು ನಿರ್ಮಾಣ ಮಾಡುವುದನ್ನು ಹಾಗೂ ನೀರಿನÀ ಸಿಂಪರಣೆ ಮಾಡುವುದನ್ನು ಕಡ್ಡಾಯ ಮಾಡಲಾಗಿದೆ.
- ಸರ್ಕಾರದ ಅಧಿಸೂಚನೆ ಸಂಖ್ಯೆ: ಅಪಜೀ 168 ಇಪಿಸಿ 2017, ದಿನಾಂಕ: 11.08.2017ರಲ್ಲಿ ರಾಜ್ಯ ಸರ್ಕಾರವು ವಾಯು (ಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ) ಕಾಯಿದೆ, 1981ರ

| | | |
|---|---|---|
| | | ಕಲಂ 19(3)ರ ಅನುಸಾರ ರಾಜ್ಯಾದ್ಯಂತ ವಾಯುಮಾಲಿನ್ಯ ನಿಯಂತ್ರಣಕ್ಕೊಳಪಟ್ಟಿರುವ ಪ್ರದೇಶದಲ್ಲಿನ ಸಿಮೆಂಟ್ ಆವಿಗೆ (kiln) ಮತ್ತು ಸಿಮೆಂಟ್ ಉತ್ಪಾದನಾ ಘಟಕಗಳಿಗೆ ಹೊಂದಿಕೊಂಡಿರುವ ಸುಣ್ಣದಕಲ್ಲನ್ನು ಬಳಸಿ ಗಂಧಕದ ಡೈಆಕ್ಸೈಡ್ ($SO_2$) ಹೊರಸೂಸುವಿಕೆಯನ್ನು ನಿಯಂತ್ರಿಸಬಲ್ಲ ಘಟಕಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಕೈಗಾರಿಕೆಗಳಲ್ಲಿ ಪೆಟ್ ಕೋಕ್ ಅನ್ನು ಇಂಧನವಾಗಿ ಬಳಸುವುದನ್ನು ನಿಷೇಧಿಸಲಾಗಿದೆ.<br>• ವಾಹನಗಳ ಹೊಗೆ ತಪಾಸಣಾ ಜವಾಬ್ದಾರಿ ಸಾರಿಗೆ ಇಲಾಖೆಯ ವ್ಯಾಪ್ತಿಯಲ್ಲಿದೆ. ಅದಾಗ್ಯೂ, ಬೆಂಗಳೂರು ನಗರದಲ್ಲಿ ಹೆಚ್ಚುತ್ತಿರುವ ವಾಯು ಮಾಲಿನ್ಯವು, ಸಾರಿಗೆ ವಲಯದಿಂದ ಉಂಟಾಗುತ್ತಿರುವುದನ್ನು ತಿಳಿದು ಮಂಡಳಿಯು ಡೀಸಲ್ ಮತ್ತು ಪೆಟ್ರೋಲ್ ವಾಹನಗಳು ಹೊರಸೂಸುವ ಹೊಗೆಯನ್ನು ಮಾಪನ ಮಾಡಲು ಸುಸಜ್ಜಿತ ಉಪಕರಣಗಳನ್ನೊಳಗೊಂಡ 12 ಹೊಗೆ ಮಾಪನ ಮಾಡುವ ಸಂಚಾರಿ ವಾಹನಗಳನ್ನು ಖರೀದಿಸಿದ್ದು, ಈ 12 ವಾಹನಗಳ ಪೈಕಿ 6 ವಾಹನಗಳು ಬೆಂಗಳೂರು ನಗರಕ್ಕೆ ಹಂಚಿಕೆ ಮಾಡಲಾಗಿದೆ. ಈ ವಾಹನಗಳು ಸಾರಿಗೆ ಇಲಾಖೆ, ಪೊಲೀಸ್ ಇಲಾಖೆ, ಬಿ.ಎಂ.ಟಿ.ಸಿ ಮತ್ತು ಕೆ.ಎಸ್.ಆರ್.ಟಿ.ಸಿ ಸಂಸ್ಥೆಗಳ ಸಹಾಯದೊಂದಿಗೆ ಜಂಟಿ ಕಾರ್ಯಾಚರಣೆ ನಡೆಸಲಾಗುತ್ತಿದ್ದು ಮಿತಿಗಿಂತ ಹೆಚ್ಚು ಹೊಗೆ ಹೊರಸೂಸುವ ವಾಹನಗಳ ಮೇಲೆ ಕಾನೂನಾತ್ಮಕವಾಗಿ ಕ್ರಮ ಕೈಗೊಳ್ಳಲಾಗುತ್ತಿದೆ.<br>• ಕೈಗಾರಿಕೆಗಳ ಚಟುವಟಿಗಳ ಅನುಸಾರವಾಗಿ ವಾಯುಮಾಲಿನ್ಯ ತಡೆಗಟ್ಟುವ ಬಗ್ಗೆ ಹೆಚ್ಚು ಮಾಹಿತಿ ನೀಡಲು ಕಾರ್ಯಾಗಾರ ಮತ್ತು ಸಭೆಗಳನ್ನು ಮಂಡಳಿಯ ಕಛೇರಿಗಳಲ್ಲಿ, ಕಾರ್ಖಾನೆಗಳಲ್ಲಿ ಹಾಗೂ ಸಂಬಂಧಿಸಿದ ಸಂಘ ಸಂಸ್ಥೆಗಳಲ್ಲಿ ಕಾಲಕಾಲಕ್ಕೆ ಹಮ್ಮಿಕೊಳ್ಳಲಾಗುತ್ತಿದೆ. ಮಂಡಳಿಯ ಅಂತರ್ಜಾಲ ಹಾಗೂ ಪತ್ರಿಕಾ ಪ್ರಕಟಣೆಗಳ ಮುಖಾಂತರ ವಾಯು ಮಾಲಿನ್ಯ ನಿಯಂತ್ರಿಸುವ ನಿಟ್ಟಿನಲ್ಲಿ ಜನರಲ್ಲಿ ತಿಳುವಳಿಕೆ ನೀಡಲಾಗುತ್ತಿದೆ.<br>• ಕೈಗಾರಿಕೆ ಚಟುವಟಿಕೆಯಿಂದ ಹೊರಬರುವ (Stack emission) ಮಂಡಳಿಯು ನಿಗಧಿಪಡಿಸಿದ ಮಾನದಂಡಗಳನ್ನು ಮೀರಿದಲ್ಲಿ ನೋಟಿಸ್ಸನ್ನು ನೀಡಲಾಗುತ್ತಿದೆ ಮತ್ತು ವಾಯು ಮಾಲಿನ್ಯವನ್ನು ತಡೆಗಟ್ಟಲು ಸರಿಪಡಿಸುವ ಕ್ರಮಗಳನ್ನು ತೆಗೆದುಕೊಳ್ಳುವಂತೆ ಸೂಚಿಸಲಾಗುತ್ತಿದೆ<br>• ವಾಹನ ಮಾಲಿನ್ಯ ತಗ್ಗಿಸುವ ಉದ್ದೇಶದಿಂದ ಕೇಂದ್ರ ಸರ್ಕಾರದ ನಿಯಮದನ್ವಯ ಏಪ್ರಿಲ್ ೨೦೨೦ರಿಂದ ವಾಹನಗಳು ಭಾರತ್ ಸ್ಟೇಜ್ VI ಎಂಜಿನ್ ಹಾಗೂ ಉರುವಲು (Fuel) ಕಡ್ಡಾಯವಾಗಿದೆ. |

| | | |
|---|---|---|
| **ಇ)** | ವಾಯು ಮಾಲಿನ್ಯದಿಂದ ಬರುವ ಕಾಯಿಲೆಗಳು ಯಾವುವು: ವಾಯು ಮಾಲಿನ್ಯದಿಂದ ಹೆಚ್ಚಾಗಿ ಮಕ್ಕಳ ಆರೋಗ್ಯದ ಮೇಲೆ ಹೆಚ್ಚಿನ ಪರಿಣಾಮ ಬೀರುತ್ತಿರುವುದು ನಿಜವೇ: | ಹವಾಮಾನ ಬದಲಾವಣೆ ಮತ್ತು ಮಾನವನ ಆರೋಗ್ಯ ಕುರಿತ ರಾಷ್ಟ್ರೀಯ ಕಾರ್ಯಕ್ರಮದ ಮಾರ್ಗಸೂಚಿಗಳ ಅನ್ವಯ ವಾಯು ಮಾಲಿನ್ಯದಿಂದ ಉಂಟಾಗುವ ಕಾಯಿಲೆಗಳು ಮಾಲಿನ್ಯ ಕಾರಕಗಳಿಗೆ ಅಲ್ಪ ಕಾಲೀನ ಅಥವಾ ದೀರ್ಘಕಾಲೀನ ಅವಧಿಗೆ ಒಡ್ಡಿಕೊಳ್ಳುವುದರ ಮೇಲೆ ಅವಲಂಬಿತವಾಗಿದೆ. ಅದರಂತೆ, ವಾಯು ಮಾಲಿನ್ಯದಿಂದ ಈ ಕೆಳಕಂಡ ಲಕ್ಷಣಗಳು ಕಾಣಿಸಿಕೊಳ್ಳುತ್ತವೆ: irritation of eyes,nose,throat and skin,cough, breathing difficulty,wheezing,chestdiscomfort,chest pain, headache, giddiness, limb weakness, facial deviation.<br><br>ಮುಂದುವರೆದು, ದುರ್ಬಲ ವರ್ಗದ ಗುಂಪಿನವರಲ್ಲಿ ಅಂದರೆ, ನವಜಾತ ಶಿಶುಗಳು, ಮಕ್ಕಳು, ಮಹಿಳೆಯರು, ಗರ್ಭಿಣಿಯರು, ವೃದ್ಧರು, ಇತರೆ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರು, ಹೊರಾಂಗಣದಲ್ಲಿ ಕೆಲಸ ಮಾಡುವವರು, ಟ್ರಾಫಿಕ್ ಪೊಲೀಸ್ ಮತ್ತು ಸ್ಥಳೀಯ ಸಂಸ್ಥೆಗಳ ಪೌರ ಕಾರ್ಮಿಕರಲ್ಲಿ Lower respiratory tract inflammation and infection. Exacerbation of asthama, bronchitis or exacerbation of chronic illenesses such Chronic Obstructive Pulmonary Disease (COPD) , ischemic heart diseases and cerebrovascular strokesನ ಲಕ್ಷಣಗಳು ಕಂಡು ಬರುತ್ತವೆ.<br><br>ಇದೇ ಅಲ್ಲದೆ, ಕಡಿಮೆ ಮಟ್ಟದ ಮಾಲಿನ್ಯ ಕಾರಕಗಳಿಗೆ ಧೀರ್ಘಕಾಲೀನ ಅವಧಿಗೆ ಒಡ್ಡಿಕೊಳ್ಳುವುದರಿಂದ Chronic illness of respiratory and cardiovascular systems, lung cancer and premature death ಗಳು ಉಂಟಾಗಬಹುದು. Integrated Disease Surveillance Programme: Integrated Health Information Platform (IHIP) ನ ವರದಿಗಳ ಅನ್ವಯ 2024ನೇ ಸಾಲಿನಲ್ಲಿ ಒಟ್ಟು ವರದಿಯಾಗಿರುವ **ಶಂಕಿತ** Infuenza Like Illness ( ILI) ಮತ್ತು **ಶಂಕಿತ** Severe Acute Respiratory Infection ( (SARI)2,75,017 ಪ್ರಕರಣಗಳ ಪೈಕಿ 41,199 ಪ್ರಕರಣಗಳು 14 ವರ್ಷದ ಒಳಗಿನ ಮಕ್ಕಳಲ್ಲಿ ವರದಿಯಾಗಿವೆ. ಅಂತೆಯೆ, 2025ನೇ ಸಾಲಿನಲ್ಲಿ ನವೆಂಬರ್ ವರೆಗೆ ವರದಿಯಾಗಿರುವ ಒಟ್ಟು 2,08,375 ಪ್ರಕರಣಗಳ ಪೈಕಿ 40,289 ಪ್ರಕರಣಗಳು 14 ವರ್ಷದ ಒಳಗಿನ ಮಕ್ಕಳಲ್ಲಿ ವರದಿಯಾಗಿವೆ. ಅಂದರೆ, ಕ್ರಮವಾಗಿ 2024 ನೇ ಸಾಲಿನಲ್ಲಿ 15% ಪ್ರಕರಣಗಳು ಹಾಗೂ 2025ನೇ ಸಾಲಿನಲ್ಲಿ 19% ಪ್ರಕರಣಗಳು ಮಕ್ಕಳಲ್ಲಿ ವರದಿಯಾಗಿವೆ. |
| **ಈ)** | ನಿಜವಿದ್ದಲ್ಲಿ ಸರ್ಕಾರದಿಂದ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ: | ವಾಯು ಮಾಲಿನ್ಯ ನಿಯಂತ್ರಣದಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳ ನಿಯಂತ್ರಣಕ್ಕಾಗಿ ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>1. NOADS (National Outdoor Air& Disease Surveillance) portal ನ ಮೂಲಕ ರಾಜ್ಯದ ಎಲ್ಲಾ ಜಿಲ್ಲಾಸ್ಪತ್ರೆಗಳನ್ನು ನೋಡಲ್ ಆಸ್ಪತ್ರೆಗಳೆಂದು ಗುರುತಿಸಲಾಗಿದ್ದು, ಪ್ರತಿದಿನ Emergency Departmentಗೆ ಬರುವ Acute Respiratory Illness ನ ಲಕ್ಷಣಗಳನ್ನು ಹೊಂದಿರುವ ರೋಗಿಗಳ ವಿವರಗಳನ್ನು ವರದಿ ಮಾಡಿ ಅಗತ್ಯ ಚಿಕಿತ್ಸೆಯನ್ನು ನೀಡಲಾಗುತ್ತಿದೆ. |

| | | |
|---|---|---|
| | | 2. ವಾಯು ಮಾಲಿನ್ಯದಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳಿಂದ ರಕ್ಷಿಸಿಕೊಳ್ಳಲು ವಿವಿಧ ಗುಂಪಿನ ಜನರಿಗೆ ಅನುಕೂಲವಾಗುವಂತೆ Health Advisoryಯನ್ನು ಸಿದ್ಧಪಡಿಸಿ ಪ್ರಚುರಪಡಿಸಲಾಗಿದೆ.<br>3. ಹವಾಮಾನ ಬದಲಾವಣೆ ಮತ್ತು ಮಾನವನ ಆರೋಗ್ಯ ಕುರಿತ ರಾಷ್ಟ್ರೀಯ ಕಾರ್ಯಕ್ರಮದ ಮಾರ್ಗಸೂಚಿಯ ಅನ್ವಯ ಸಿದ್ಧಪಡಿಸಿರುವ ರಾಜ್ಯ ಮತ್ತು ಜಿಲ್ಲಾ ಮಟ್ಟದ ಕ್ರಿಯಾಯೋಜನೆಯಲ್ಲಿ ಅಗತ್ಯ ಚಟುವಟಿಕೆಗಳಾದ ಆರೋಗ್ಯ ಶಿಕ್ಷಣ, ತರಬೇತಿ ಹಾಗೂ ಕೌಶಲ್ಯಾಭಿವೃದ್ಧಿ, ಇತರೆ ಸಹಯೋಗದಾರರ ಜವಾಬ್ದಾರಿಗಳ ಅನ್ವಯ ಎಲ್ಲಾ ಹಂತಗಳಲ್ಲಿ ಚಟುವಟಿಕೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>4. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚನೆಯಾಗಿರುವ ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಹಾಗೂ ಎನ್ವಿರಾನ್ಮೆಂಟಲ್ ಹೆಲ್ತ್ ಸೆಲ್ ನಿಯಮಿತವಾಗಿ ಸಭೆ ಸೇರಿ ಅಗತ್ಯ ನಿರ್ಣಯಗಳನ್ನು ಕೈಗೊಳ್ಳುತ್ತವೆ.<br>5. ವಾಯು ಮಾಲಿನ್ಯ ನಿಯಂತ್ರಣದ ಸಂಬಂಧ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ವಿವಿಧ ಆರೋಗ್ಯ ಶಿಕ್ಷಣ ಮೆಟೀರಿಯಲ್‌ಅನ್ನು ಸಿದ್ಧಪಡಿಸಿ, ವಿವಿಧ ಮಾಧ್ಯಮಗಳಲ್ಲಿ ಪ್ರಚುರಪಡಿಸಲಾಗುತ್ತಿದೆ.<br>6. ವಾಯು ಮಾಲಿನ್ಯ ಹಾಗೂ ಆರೋಗ್ಯದ ಪರಿಣಾಮಗಳ ಸಂಬಂಧ ಇಂಗ್ಲಿಷ್ ನಲ್ಲಿ ಲಭ್ಯವಿರುವ ಆಶಾ ಕೈಪಿಡಿಯನ್ನು ಕನ್ನಡ ಭಾಷೆಗೆ ಅನುವಾದಿಸಿ ಪ್ರಚುರಪಡಿಸಲಾಗಿದೆ.<br>7. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಪ್ರಕಟಿಸುವ, ಬೆಂಗಳೂರು ನಗರದ ವಾಯು ಗುಣಮಟ್ಟ ಸೂಚ್ಯಂಕದ **Continuous Ambient Air Quality Monitoring System** (CAAQ**MS**) ದತ್ತಾಂಶವನ್ನು ಸಂಬಂಧಪಟ್ಟವರೊಂದಿಗೆ ಪ್ರತಿದಿನ ಹಂಚಿಕೊಳ್ಳಲಾಗುತ್ತಿದೆ.<br>8. ರಾಜ್ಯದ ಎಲ್ಲಾ ಜಿಲ್ಲೆಗಳ ವಾಯು ಗುಣಮಟ್ಟ ಸೂಚ್ಯಂಕವನ್ನು ಸೂಚಿಸುವ Sameer Appನ ಮೂಲಕ ಅಗತ್ಯ ಮಾಹಿತಿ ಪಡೆಯುವಂತೆ ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತಿದೆ.<br>9. ವಾಯು ಮಾಲಿನ್ಯದ ಸಂದರ್ಭದಲ್ಲಿ ಸಾರ್ವಜನಿಕರು ಪಾಲಿಸಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು Dos &Donts ಸಲಹಾ ಪತ್ರವನ್ನು ಹೊರಡಿಸಲಾಗಿದೆ. |
| **ಉ)** | ಮಾಲಿನ್ಯ ಸಂಬಂಧಿತ ವಿಮಾ ಕ್ಲೇಮ್ ಗಳಲ್ಲಿ ರಾಜ್ಯ ಹಾಗೂ ಬೆಂಗಳೂರು ಯಾವ ಸ್ಥಾನದಲ್ಲಿದೆ? | ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನಡಿ ಅನುಷ್ಠಾನಗೊಂಡಿರುವ ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆ ಮುಖ್ಯ ಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆಯಡಿ ವಾಯು ಮಾಲಿನ್ಯ ಸಂಬಂಧಿ ಕಾಯಿಲೆಗಳ ಕಾರ್ಯ ವಿಧಾನದ ಪ್ರತ್ಯೇಕ ಕೋಡ್‌ಗಳು ಲಭ್ಯವಿರುವುದಿಲ್ಲ.<br><br>ಆದಾಗ್ಯೂ, ಅಸ್ತಮಾ, ಬ್ರಾಂಕೈಟಿಸ್, ಸಿಓಪಿಡಿ ಮುಂತಾದ ಮಾಲಿನ್ಯ ಸಂಬಂಧಿತ ಚಿಕಿತ್ಸಾ ಕಾರ್ಯವಿಧಾನಗಳ ರಾಜ್ಯ ಮತ್ತು ಬೆಂಗಳೂರಿನ (ನಗರ |

ಮತ್ತು ಗ್ರಾಮೀಣ) 2024-25 & 2025-26 ರ ಏಪ್ರಿಲ್ ನಿಂದ ನವೆಂಬರ್ ವರೆಗಿನ ದತ್ತಾಂಶವನ್ನು ಈ ಕೆಳಕಂಡಂತೆ ಒದಗಿಸಲಾಗಿದೆ.

**AB PMJAY CM's ArK Scheme Preauths approved as of 1-12-2025.**

| HospDist | Apr-Nov 2024 | | Apr-Nov 2025 | |
|---|---|---|---|---|
| | Cases | Amount in Rs. | Cases | Amount in Rs. |
| BENGALURU | 3,891 | 4,13,93,046 | 4,187 | 4,18,33,711 |
| BENGALURU RURAL | 1,238 | 1,13,20,275 | 689 | 69,30,699 |
| **Grand Total** | **5,129** | **5,27,13,321** | **4,876** | **4,87,64,410** |
| **State Total** | **83972** | **345476635** | **60908** | **274737977** |

ಮುಂದುವರೆದು, ಮಾಲಿನ್ಯ ಸಂಬಂಧಿತ ವಿಮಾ ಕ್ಲೇಮ್‌ಗಳಲ್ಲಿ ರಾಜ್ಯ ಹಾಗೂ ಬೆಂಗಳೂರು ಯಾವ ಸ್ಥಾನದಲ್ಲಿದೆ ಎಂಬ ಮಾಹಿತಿ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ನ ಅಡಿಯಲ್ಲಿ ಲಭ್ಯವಿರುವುದಿಲ್ಲ.

**ಸಂಖ್ಯೆ:** ಅಪಜೀ 355 ಇಪಿಸಿ 2025.

**(ಈಶ್ವರ ಬಿ.ಖಂಡ್ರೆ)**
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು.